ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 733
ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 25-09-2020.
ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಸುವರ್ಣ ಕನ್ನಡ ಸಮುಚ್ಚಯ ಭವನದ ಕಾಮಗಾರಿ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಭವನದ ಕಾಮಗಾರಿಯು ಅನುದಾನದ ಕೊರತೆಯಿಂದ ನೆನೆಗುದಿಗೆ ಬಿದ್ದಿದ್ದು, 2019-20ನೇ ಸಾಲಿನಲ್ಲಿ ರೂ.500.00 ಲಕ್ಷಗಳ ಅನುದಾನ ಮಂಜೂರು ಮಾಡಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗಿದೆ.
2	ಸದರಿ ಕಾಮಗಾರಿ ಅನುಮೋದನೆಗೊಂಡ ವರ್ಷ ಯಾವುದು;	ಸದರಿ ಕಾಮಗಾರಿಯು 2005-06 ನೇ ಸಾಲಿನಲ್ಲಿ ಅನುಮೋದನೆಗೊಂಡಿರುತ್ತದೆ.
3	ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನ ಎಷ್ಟು; (ಸಂಪೂರ್ಣ ವಿವರ ನೀಡುವುದು)	ಸದರಿ ಕಾಮಗಾರಿಗೆ ಈ ಕೆಳಕಂಡ ಸಾಲುಗಳಲ್ಲಿ ಒಟ್ಟು ರೂ.807.00 ಲಕ್ಷಗಳು ಬಿಡುಗಡೆ ಮಾಡಲಾಗಿದೆ. 2005-06ನೇ ಸಾಲಿನಲ್ಲಿ ರೂ.57.00 ಲಕ್ಷ 2006-07ನೇ ಸಾಲಿನಲ್ಲಿ ರೂ.50.00 ಲಕ್ಷ 2017-18ನೇ ಸಾಲಿನಲ್ಲಿ ರೂ.200.00 ಲಕ್ಷ 2019-20ನೇ ಸಾಲಿನಲ್ಲಿ ರೂ.500.00 ಲಕ್ಷ ಒಟ್ಟು ರೂ.807.00 ಲಕ್ಷ
4	ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ವಿಳಂಬಕ್ಕೆ ಕಾರಣಗಳೇನು;	ಪ್ರಸ್ತುತ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ನಿರ್ಮಾಣ ಕಾಮಗಾರಿಯ ನೆಲಮಹಡಿ, ಮೊದಲನೆಯ ಮಹಡಿ ಪೂರ್ಣಗೊಂಡಿದ್ದು, ಎರಡನೆಯ ಮಹಡಿ ಸ್ಲ್ಯಾಬ್ ಹಂತಕ್ಕೆ ಬಂದಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಅನುದಾನ ಲಭ್ಯತೆ ಇಲ್ಲದೇ ಇದ್ದ ಕಾರಣ ಉಳಿಕೆ ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬವಾಗಿದ್ದು, ಪ್ರಸ್ತುತ ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ 2019-20ನೇ ಸಾಲಿನಲ್ಲಿ ರೂ. 500.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.
5	ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು?	ಶೀಘ್ರದಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲಾಗುವುದು.

ಕಸಂಪವಾ 90 ಕವಿಸ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ,
ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು